**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.**

ಸಂಖ್ಯೆ:ಎ8/ಎಸ್ಎಸ್ಎಲ್‌ಸಿ/ಜೂನ್-23/03/2023-24 ದಿನಾಂಕ:26.05.2023

**ಗೆ,**

ರಾಜ್ಯದ ಎಲ್ಲಾ ಉಪ ನಿರ್ದೇಶಕರು (ಆಡಳಿತ)
ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ

ಮಾನ್ಯರೆ

ವಿಷಯ:- ಮಾರ್ಚ್-2023ರ ಮುಖ್ಯ ಪರೀಕ್ಷೆಯಲ್ಲಿ ಹಾಜರಾದ ವಿದ್ಯಾರ್ಥಿಗಳ ಮೌಲ್ಯಮಾಪನಗೊಂಡ ಉತ್ತರಪತ್ರಿಕೆಗಳ ಮರುಎಣಿಕೆ ಮತ್ತು ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ದಿನಾಂಕ ವಿಸ್ತರಣೆ ಕುರಿತು.

ಉಲ್ಲೇಖ:-
1. ಮಂಡಳಿ ಅಧಿಸೂಚನೆ ಸಂಖ್ಯೆ: ಎ8/ಎಸ್ಎಸ್ಎಲ್‌ಸಿ/ಜೂನ್-23/03/2023-24 ದಿನಾಂಕ: 07.05.2023.
2. ಈ ಕಛೇರಿ ಸುತ್ತೋಲೆ ಸಂಖ್ಯೆ:ಎ8/ಎಸ್ಎಸ್ಎಲ್‌ಸಿ/ಮು.ಪ.ಫ/02/2023-24 ದಿನಾಂಕ:07.05.2023
3. ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ:15.05.2023 ಮತ್ತು ದಿ:19.05.2023

* * * * *

ಮಾರ್ಚ್-2023ರ ಮುಖ್ಯ ಪರೀಕ್ಷೆಯಲ್ಲಿ ಹಾಜರಾದ ವಿದ್ಯಾರ್ಥಿಗಳ ಮೌಲ್ಯಮಾಪನಗೊಂಡ ಉತ್ತರಪತ್ರಿಕೆಗಳ ಮರುಎಣಿಕೆ ಮತ್ತು ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ದಿನಾಂಕ:25.05.2023ರ ವರೆಗೆ ವಿಸ್ತರಿಸಲಾಗಿತ್ತು. ಪ್ರಸ್ತುತ ಅಭ್ಯರ್ಥಿಗಳು/ಪೋಷಕರು ಹಾಗೂ ಶಾಲಾ ಮುಖ್ಯೋಪಾಧ್ಯಾಯರು ದಿನಾಂಕವನ್ನು ವಿಸ್ತರಿಸಲು ಮಂಡಳಿಗೆ ಮನವಿ ಮಾಡಿರುವುದರ ಹಿನ್ನೆಲೆಯಲ್ಲಿ ಮೌಲ್ಯಮಾಪನಗೊಂಡ ಉತ್ತರಪತ್ರಿಕೆಗಳ ಮರುಎಣಿಕೆ ಮತ್ತು ಮರುಮೌಲ್ಯಮಾಪನಕ್ಕೆ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕೆಳಕಂಡಂತೆ ದಿನಾಂಕವನ್ನು ವಿಸ್ತರಿಸಲಾಗಿದೆ.

| ಕ್ರ ಸಂ | ವಿವರ | ಈಗಾಗಲೇ ನಿಗದಿಪಡಿಸಿದ್ದ ದಿನಾಂಕ | ವಿಸ್ತರಣೆ ಮಾಡಿದ ಕೊನೆಯ ದಿನಾಂಕ |
|---|---|---|---|
| 1 | ಉತ್ತರ ಪತ್ರಿಕೆಗಳ ಮರುಎಣಿಕೆಗೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 25.05.2023 | 29.05.2023 |
| 2 | ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 25.05.2023 | 29.05.2023 |
| 3 | ಡೆಬಿಟ್ ಕಾರ್ಡ್/ಕ್ರೆಡಿಟ್ ಕಾರ್ಡ್/ ಆನ್‌ಲೈನ್ ಬ್ಯಾಂಕಿಂಗ್ ಸೌಲಭ್ಯವಿಲ್ಲದವರು ಆನ್‌ಲೈನ್‌ನಲ್ಲಿ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ ನಂತರ Offline ಚಲನ್ ಡೌನ್‌ಲೋಡ್ ಮಾಡಿಕೊಂಡು ಶುಲ್ಕವನ್ನು ಬಿ1/ಕೆ1/ಗ್ರಾಮ1/ಬ್ಯಾಂಕಿಗೆ ಪಾವತಿಸಲು ಅಂತಿಮ ದಿನಾಂಕ: | 26.05.2023 | 30.05.2023 |

ಮೇಲೆ ವಿವರಿಸಿರುವಂತೆ ವಿಸ್ತರಿಸಿರುವ ದಿನಾಂಕದ ಕುರಿತು ತಮ್ಮ ವ್ಯಾಪ್ತಿಯಲ್ಲಿ ಬರುವ ಶಾಲಾ ಮುಖ್ಯೋಪಾಧ್ಯಾಯರ ಮುಖಾಂತರ ವಿದ್ಯಾರ್ಥಿಗಳ/ಪೋಷಕರ ಗಮನಕ್ಕೆ ತಂದು ವಿದ್ಯಾರ್ಥಿಗಳು ಇದರ ಸದುಪಯೋಗವನ್ನು ಪಡೆದುಕೊಳ್ಳಲು ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಈ ಮೂಲಕ ತಿಳಿಸಿದೆ.

ತಮ್ಮ ನಂಬುಗೆಯ,

(ಮಾನ್ಯ ಅಧ್ಯಕ್ಷರ ಆದೇಶಾನುಸಾರ)

(ಹೆಚ್.ಎನ್.ಗೋಪಾಲಕೃಷ್ಣ)
ನಿರ್ದೇಶಕರು (ಪರೀಕ್ಷೆಗಳು)

**ಗೆ**

1. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ, ಅನುದಾನರಹಿತ ಶಾಲೆಗಳ ಮುಖ್ಯ ಶಿಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ಮಂಡಳಿಯ ಎಲ್ಲಾ ಪರಿಶೀಲನಾ ಶಾಖೆಗಳ ಶಾಖಾಧಿಕಾರಿಗಳು/ಅಧೀಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.

*A8_letter1*